ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ
ದಿನಾಂಕ : DATE : 8/7/2020

**ಕನ್ನಡಿಗರಿಂದಲೇ ಸಂಶೋಧನೆ, ಅಭಿವೃದ್ಧಿ ತಗ್ಗಲಿದೆ ವಿದೇಶಿ ಅವಲಂಬನೆ**

# ಕೋವಿಡ್ ಹೋರಾಟಕ್ಕೆ ರಾಜ್ಯದ 6 ಸಾಧನ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕರೊನಾ ನಿಯಂತ್ರಣಕ್ಕೆ ಬಳಕೆಯಾಗುತ್ತಿರುವ ಪ್ರಮುಖ ಆರು ಉಪಕರಣಗಳು ಇನ್ನು ರಾಜ್ಯದಲ್ಲೇ ಉತ್ಪಾದನೆಯಾಗಲಿವೆ. ವಿದೇಶಗಳ ಮೇಲೆ ಅವಲಂಬಿತವಾಗದೇ ಕರ್ನಾಟಕದ ವಿಜ್ಞಾನಿಗಳು ಮತ್ತು ಸಂಶೋಧಕರು ಈ ಉಪಕರಣಗಳನ್ನು ಅಭಿವೃದ್ಧಿಪಡಿಸಿದ್ದಾರೆ. ರಾಜ್ಯದ ಐಟಿ- ಬಿಟಿ ಇಲಾಖೆ ವ್ಯಾಪ್ತಿಯ ಬೆಂಗಳೂರು ಬಯೋ ಇನ್ನೋವೇಷನ್ ಕೇಂದ್ರದ ಅಡಿಯಲ್ಲಿ ವಿವಿಧ ಸ್ಟಾರ್ಟಪ್‌ಗಳು ಈ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಿದ್ದು, ಇದರಿಂದಾಗಿ ವಿದೇಶಿ ಅವಲಂಬನೆಯನ್ನು ತಗ್ಗಿಸಬಹುದಾಗಿದೆ. ಉಪಮುಖ್ಯಮಂತ್ರಿ ಡಾ. ಅಶ್ವತ್ಥನಾರಾಯಣ ಅವರು ಈ ಆರು ಉತ್ಪನ್ನಗಳನ್ನು ಮಂಗಳವಾರ ಬಿಡುಗಡೆ ಮಾಡಿದ್ದಾರೆ. ಇವುಗಳಿಗೆ ಐಸಿಎಂಆರ್ (ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ) ಮಾನ್ಯತೆ ಸಿಕ್ಕಿದೆ. ಈ ಕ್ಷಣದಿಂದಲೇ ಇವುಗಳನ್ನು ಎಲ್ಲರೂ ಬಳಸಬಹುದು, ಖರೀದಿ ಮಾಡಬಹುದು. ○ ಪುಟ 3

**01** **ಶೀಲೆಡೆಕ್ಸ್ 24 ಯಂತ್ರ:** ಓವನ್ ಮಾದರಿಯ ಈ ಸಾಧನದಲ್ಲಿ



ಅಲ್ಟ್ರಾವೈಲೆಟ್ ಕಿರಣ ಪ್ರಸಾರವಾಗುತ್ತದೆ. ಇದರಿಂದ ವೈರಸ್ 15 ಸೆಕೆಂಡುಗಳಲ್ಲಿ ಸಾಯುತ್ತದೆ. ಕಚೇರಿಗಳು, ಮನೆಗಳು, ವಿಮಾನ ನಿಲ್ದಾಣ, ರೈಲು ನಿಲ್ದಾಣಗಳಲ್ಲಿ ಲಗೇಜ್, ವಸ್ತುಗಳ ಮೇಲಿರುವ ವೈರಸ್ ನಾಶ ಮಾಡಬಹುದು. ಈ ಉತ್ಪನ್ನವನ್ನು ಬಯೋ ಫೀ ಕಂಪನಿಯ ರವಿಕುಮಾರ್ ಸಂಶೋಧಿಸಿ, ತಯಾರಿಸಿದ್ದಾರೆ.

**02** **ಫ್ಲೋರೋಸೆನ್ಸ್ ಪ್ರೋಬ್ಸ್:** ಇದು ಕೋವಿಡ್ ಕಿಟ್‌ನಲ್ಲಿ ಇರಬಹುದಾದ ಪ್ರಮುಖ ಅಂಗ. ಇದು ಇಲ್ಲದಿದ್ದರೆ ವೈರಸ್ ಪತ್ತೆ ಮಾಡಲು ಸಾಧ್ಯವಿಲ್ಲ. ಭಾರತದಲ್ಲಿ ಕೋವಿಡ್ ಕಿಟ್ ತಯಾರಿಸುವ ಕಂಪನಿಗಳಿಗೆ ಈ ಸಂಶೋಧನೆ ವರದಾನವಾಗಿದೆ. ಕಿಟ್ ತಯಾರಿಸುವುದು ಸುಲಭವಾಗಲಿದೆ. ಇದನ್ನು ವಿಎನ್ ಐಆರ್ ಸಂಸ್ಥೆಯ ಡಾ. ಗೋವಿಂದರಾಜು ಮತ್ತು ಡಾ. ಮೆಹರ್ ಪ್ರಕಾಶ್ ಅಭಿವೃದ್ಧಿಪಡಿಸಿದ್ದಾರೆ.

## ಯಾವ ಉತ್ಪನ್ನಗಳು?

ವಿಜಯವಾಣಿ ಚಿತ್ರ




ಅಭಿವೃದ್ಧಿ ಪಡಿಸಲಾಗಿರುವ ಉತ್ಪನ್ನಗಳನ್ನು ಪ್ರದರ್ಶಿಸುತ್ತಿರುವ ಉಪಮುಖ್ಯಮಂತ್ರಿ ಡಾ. ಅಶ್ವತ್ಥನಾರಾಯಣ ಹಾಗೂ ಸಂಶೋಧಕರು

**03** **ಭ್ರೂಣ ನಿಗಾ ಯಂತ್ರ:** ಕೋವಿಡ್ ಇದ್ದಾಗ ಗರ್ಭಿಣಿಯರು ನೇರವಾಗಿ ವೈದ್ಯರನ್ನು ಭೇಟಿಯಾಗಲು ಸಾಧ್ಯವಿಲ್ಲ. ಗರ್ಭಿಣಿ ಈ ಉಪಕರಣವನ್ನು ತಮ್ಮ ಹೊಟ್ಟೆ ಮೇಲಿಟ್ಟುಕೊಂಡರೆ, ವೈದ್ಯರು ತಾವಿದ್ದಲ್ಲಿಂದಲೇ ಎಲ್ಲ ಮಾಹಿತಿಯೂ ತಿಳಿಯಬಹುದು. ಈ ಯಂತ್ರವನ್ನು ದಕ್ಷ್ ಎಂದು ಕರೆಯಲಾಗುತ್ತದೆ. ಜೆನಿತ್ರೀ ಕಂಪನಿಯ ಡಾ. ಅರುಣ್ ಅಗರವಾಲ್ ಇದನ್ನು ಅಭಿವೃದ್ಧಿಪಡಿಸಿದ್ದಾರೆ.

**04** **ವಿಟಿಎಂ:** ಜೀವಂತ ವೈರಸ್ ಅನ್ನು ಒಂದು ಕಡೆಯಿಂದ ಇನ್ನೊಂದೆಡೆಗೆ ಸಾಗಿಸುವುದು ಅತ್ಯಂತ ಸವಾಲಿನದ್ದು, ಅಪಾಯಕಾರಿ ಕೂಡ. ಈ ಉಪಕರಣವನ್ನು ವಿದೇಶಗಳಿಂದ ದುಬಾರಿ ಬೆಲೆ ತೆತ್ತು ಆಮದು ಮಾಡಿಕೊಳ್ಳಬೇಕಾಗಿತ್ತು. ಡೇಕೊಂತೋ ಎಂಬ ಹೆಸರಿನ ಈ ಉತ್ಪನ್ನವನ್ನು ಡಿನೋವೋ ಬಯೋಲ್ಯಾಬ್ಸ್ ನ ಐಬಿಎಬಿಯ ಮಂಜುನಾಥ್ ಹಾಗೂ ದಿನೇಶ್ ಅವರು ಸಂಶೋಧಿಸಿ ತಯಾರಿಸಿದ್ದಾರೆ. ○ ಪುಟ 3

# ಕೋವಿಡ್ ಹೋರಾಟಕ್ಕೆ ರಾಜ್ಯದ 6 ಅಸ್ತ್ರ

ಮೊದಲನೇ ಪುಟದಿಂದ...

ಸರ್ಕಾರ ಈ ಉತ್ಪನ್ನಗಳಿಗೆ ಎಲ್ಲ ರೀತಿಯ ಪ್ರೋತ್ಸಾಹ ನೀಡಲಿದೆ ಎಂದು ಅವರು ತಿಳಿಸಿದರು. ಐಟಿ-ಬಿಟಿ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಮಣ ರೆಡ್ಡಿ, ಬೆಂಗಳೂರು ಬಯೊ ಇನ್ನೊವೇಷನ್ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಡಾ.ಜಿತೇಂದ್ರ ಕುಮಾರ್ ಈ ವೇಳೆ ಇದ್ದರು.



ವಿದೇಶಗಳಿಂದ ನಾವು ಆಮದು ಮಾಡಿಕೊಳ್ಳುತ್ತಿದ್ದ ಉತ್ಪನ್ನಗಳಿಗಿಂತ ಇವು ಉತ್ತಮ ಗುಣಮಟ್ಟದವು. ಅವುಗಳಿಗಿಂತ ಮುಂದುವರಿದ ತಂತ್ರಜ್ಞಾನ ಹೊಂದಿವೆ. ಕೋವಿಡ್ ವಿರುದ್ಧದ ಹೋರಾಟಕ್ಕೆ ಇದರಿಂದ ಬಲ ಬಂದಂತಾಗಿದೆ.

| ಡಾ. ಸಿ.ಎನ್. ಅಶ್ವತ್ಥನಾರಾಯಣ ಡಿಸಿಎಂ.

## ಯಾವ ಉತ್ಪನ್ನಗಳು?

ಮೊದಲನೇ ಪುಟದಿಂದ...

**05 ಕೋವ್-ಅಸ್ತ್ರ:** ಇದುವರೆಗೂ ಗಂಟಲು ದ್ರವ ಮತ್ತಿತರ ಮಾದರಿಗಳನ್ನು ಪಡೆದು ಕೋವಿಡ್ ಪತ್ತೆ ಮಾಡಲಾಗುತ್ತಿತ್ತು. ಈಗ ಕೋವ್ - ಅಸ್ತ್ರದ ಮೂಲಕ ರೋಗಿಯ ಎದೆಯ ಭಾಗದ ಎಕ್ಸ್‌ರೇ ತೆಗೆದು ವೈರಸ್ ಇದೆಯೇ ಇಲ್ಲವೇ ಎಂಬುದನ್ನು ಪತ್ತೆ ಮಾಡಬಹುದಾಗಿದೆ. 150-200 ರೂ. ಎಕ್ಸ್‌ರೇಯಿಂದ ಸೋಂಕನ್ನು ಪತ್ತೆ ಮಾಡಬಹುದು. ಇದನ್ನು ಅಯಿಂದ್ರ ಕಂಪನಿಯ ಆದರ್ಶ್ ನಟರಾಜನ್ ಎಂಬುವರು ಸಂಶೋಧಿಸಿ, ಅಭಿವೃದ್ಧಿಪಡಿಸಿದ್ದಾರೆ.

**06 ಫೇಸ್ ವಾಶ್:** ಇದನ್ನು ಗಿಡಮೂಲಿಕೆಗಳಿಂದ ತಯಾರಿಸಲಾಗಿದೆ. ಮುಖದ ಮೇಲೆ ಕೂರುವ ಕೋವಿಡ್ ವೈರಸ್ ಜತೆಗೆ ಬೇರೆ ಯಾವುದೇ ವೈರಾಣುವನ್ನು ಕ್ಷಣಗಳಲ್ಲಿ ನಾಶ ಮಾಡುವ ಫೇಸ್ ವಾಶ್ ಇದಾಗಿದೆ. ಕೋವಿಡ್‌ನಂತಹ ಸೂಕ್ಷ್ಮ ಸಂದರ್ಭಗಳಲ್ಲಿ ಇದು ಬಹಳ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತದೆ. ಆಟ್ರಿಮ್ಡ್ ಕಂಪನಿಯ ಡಾ. ಲತಾ ಡ್ಯಾಮಲ್ ಇದನ್ನು ಸಂಶೋಧಿಸಿ ಅಭಿವೃದ್ಧಿಪಡಿಸಿದ್ದಾರೆ.